# ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ., ನ್ಯಾಯಾಲಯ.
# ಹಿರೇಕೆರೂರು.
## ಸಿ.ಸಿ.ನಂಬರ್: 223/2014

ಸಿಡಬ್ಲ್ಯೂ: 2

ಪಿಡಬ್ಲ್ಯೂ: 1

| | | |
|---|---|---|
| ಸಾಕ್ಷಿಯ ಹೆಸರು | : | ಇಸ್ಮಾಯಿಲ್ ಕಾಗಿನೆಲೆ |
| ತಂದೆಯ ಹೆಸರು | : | ವಾಬಾಸಾಬ |
| ವಯಸ್ಸು | : | 41 ವರ್ಷ |
| ಉದ್ಯೋಗ | : | ವ್ಯಾಪಾರ |
| ವಾಸಸ್ಥಳ | : | ಚಿಕ್ಕೇರೂರು |

ಇಂದು ದಿನಾಂಕ:23.12.2019 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆ:** ಮಾನ್ಯ ಎಪಿಪಿಯವರಿಂದ:

ಸಾಕ್ಷಿಯು ಘಟನಾ ಜಾಗದ ಪಂಚನಾಮೆ ಮತ್ತು ಹಸ್ತ ನಕಾಶೆಯ ಮೇಲೆ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಪಂಚನಾಮೆಯನ್ನು ನಿಪಿ-1, ಹಸ್ತ ನಕಾಶೆಯನ್ನು ನಿಪಿ-2 ಎಂದು, ಸಾಕ್ಷಿಯ ಸಹಿಗಳನ್ನು ನಿಪಿ-1(ಎ) ಮತ್ತು ನಿಪಿ-2(ಎ) ಎಂದು ಗುರುತಿಸಲಾಯಿತು. ನಿಪಿ-1 ಮತ್ತು 2 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ. ಸಾಕ್ಷಿಯು ಒಂದು ಪೋಟೋವನ್ನು ನೋಡಿ ಗುರುತಿಸಿದ್ದರಿಂದ, ಸದರಿ ಪೋಟೋವನ್ನು ನಿಪಿ-3 ಎಂದು ಗುರುತಿಸಲಾಯಿತು. ಸದರಿ ಪೋಟೋವನ್ನು ಪೋಲಿಸರು ಏಕೆ ತೆಗೆದರು ಎಂದು ನನಗೆ ಗೊತ್ತಿಲ್ಲ. ನಿಪಿ-1 ಮತ್ತು 2 ರಲ್ಲಿರುವ ಸಹಿಗಳನ್ನು ಚಿಕ್ಕೇರೂರಿನಲ್ಲಿ ಪೋಲಿಸರ ಕೋರಿಕೆಯ ಮೇರೆಗೆ ಮಾಡಿರುತ್ತೇನೆ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ನಿಪಿ-3 ರಲ್ಲಿ ಕಾಣುವ ಮನೆ ಆರೋಪಿತರ ಮನೆ ಇರುತ್ತದೆ. ನನಗೆ ಆರೋಪಿತರು ಗೊತ್ತು. ಆರೋಪಿತರು ಚಾಸಾ-1 ರವರಿಗೆ ಯಾವುದೇ ದೈಹಿಕ ಮತ್ತು ಮಾನಸಿಕ ಹಿಂಸೆ ನೀಡಿ, ವರದಕ್ಷಿಣೆ ಕಿರುಕುಳ ನೀಡಿರುವ ಬಗ್ಗೆ ನನಗೆ ಗೊತ್ತಿಲ್ಲ. ಆ ಕುರಿತು ನಾನು ಪೋಲಿಸರ ಮುಂದೆ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಅಭಿಯೋಜನೆಗೆ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ** ಮಾನ್ಯ ಎಪಿಪಿಯವರಿಂದಃ

ಸಾಕ್ಷಿಗೆ ಅವರ ಹೇಳಿಕೆಯ ಭಾಗವಾದ, "ಮಹ್ಮದ್ ಇಬ್ರಾಹಿಂ ಇವರ ಮದುವೆ ನಂತರ ------ಪಂಚನಾಮೆಗೆ ಸಹಿ ಮಾಡಿರುತ್ತೇನೆ" ಎಂಬ ಭಾಗವನ್ನು ಸಾಕ್ಷಿಗೆ ಸಂಪೂರ್ಣವಾಗಿ ಓದಿ ಹೇಳಿ ತಿಳಿಸಲಾಗಿ ಸಾಕ್ಷಿಯು ಸದರಿ ಹೇಳಿಕೆಯ ಭಾಗವನ್ನು ತಿರಸ್ಕರಿಸಿರುತ್ತಾರೆ. ಸದರಿ ತಿರಸ್ಕರಿಸಿದ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿಪಿ-1 ಪಂಚನಾಮೆಯ ಸಂಪೂರ್ಣ ಸಂಗತಿಗಳನ್ನು ಓದಿ ಹೇಳಲಾಗಿ ಸಂಪೂರ್ಣವಾಗಿ ತಿರಸ್ಕರಿಸಿರುತ್ತಾರೆ. ನನ್ನ ಸಮಕ್ಷಮ ನಿಪಿ-1 ರಂತೆ ಪಂಚನಾಮೆ ಮಾಡಿದ್ದರೂ ಸಹ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಸಹಿ/-

ಓ ಹೇ ಕೇ ಸರಿ ಇದೆ.

ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.